ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ : ಪಪೂಶಿಇ/ಶೈ.ಶಾ./ತ್ರಿ.ಶಿ.ನಿ /2020-21 ದಿನಾಂಕ 29/12/.2020

-: ಜ್ಞಾಪನ :-

ವಿಷಯ: 2020-21ನೇ ಸಾಲಿನಲ್ಲಿ ನೇಮಕವಾಗಿರುವ ಉಪನ್ಯಾಸಕರಿಗೆ ಇಂಡಕ್ಷನ್ ತರಬೇತಿಗೆ ಉಪನ್ಯಾಸಕರನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: 1. ನಿರ್ದೇಶಕರು, ಡಿ.ಎಸ್.ಇ.ಆರ್.ಟಿ ರವರ ಜ್ಞಾಪನ ದಿನಾಂಕ: 28-12-2020.

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದನ್ವಯ 2020-21ನೇ ಸಾಲಿನಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಹೊಸದಾಗಿ ನೇಮಕವಾಗಿರುವ ಉಪನ್ಯಾಸಕರುಗಳಿಗೆ ಇಲಾಖಾ ಸಂರಚನೆ ಮತ್ತು ಕಾರ್ಯಕ್ರಮಗಳು ಹಾಗೂ ವೃತ್ತಿಪರ ಕೌಶಲ್ಯಗಳ ಅಭಿವೃದ್ಧಿಗಾಗಿ ದಿನಾಂಕ: 04-01-2021 ರಿಂದ 10-01-2021 ಮತ್ತು 11-01-2021 ರಿಂದ 17-01-2021 ರವರೆಗೆ ಇಂಡಕ್ಷನ್ ತರಬೇತಿಯನ್ನು ನಡೆಸಲಾಗುತ್ತಿದೆ. ಈ ಪತ್ರದೊಂದಿಗೆ ಲಗತ್ತಿಸಲಾದ ಅನುಬಂಧದಲ್ಲಿರುವಂತೆ ಉಪನ್ಯಾಸಕರನ್ನು ತರಬೇತಿಗೆ ಹಿಂದಿನ ದಿನವೇ ವರದಿ ಮಾಡಿಕೊಳ್ಳಲು ಅನುಕೂಲವಾಗುವಂತೆ ನಿಯೋಜಿಸುವುದು. ಎಲ್ಲಾ ಜಿಲ್ಲೆಗಳ ಉಪ ನಿರ್ದೇಶಕರು ಸೂಚಿಸಿರುವ ಜಿಲ್ಲೆಗಳ ಡಯಟ್‌ಗಳ ಪ್ರಾಂಶುಪಾಲರೊಂದಿಗೆ ಸಂಪರ್ಕವಿರಿಸಿಕೊಂಡು ತರಬೇತಿಗೆ ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಉಪನ್ಯಾಸಕರನ್ನು ನಿಯೋಜಿಸಲು ಸೂಚಿಸಿದೆ. ತರಬೇತಿಯ ಸ್ಥಳವನ್ನು ದಿನಾಂಕ: 01.01.2021 ರಂದು ನಡೆಯುವ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ತಿಳಿಸಲಾಗುವುದು. ತರಬೇತಿ ನಡೆಯುವ ಡಯಟ್ ಕೇಂದ್ರಗಳಿಗೆ ಸಂಬಂಧಿಸಿದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಸಂಪೂರ್ಣ ಮೇಲು ಉಸ್ತುವಾರಿಯನ್ನು ನೋಡಿಕೊಳ್ಳುವುದು.

**ವಿಶೇಷ ಸೂಚನೆ:** ಈ ಸಂಬಂಧ ಮಾಹಿತಿ ನೀಡಲು ದಿನಾಂಕ: 01-01-2021 ರಂದು ಬೆಳಿಗ್ಗೆ 10:30 ರಿಂದ 01:30 ರವರೆಗೆ ವಿಡಿಯೋ ಕಾನ್ಫರೆನ್ಸ್ ಆಯೋಜಿಸಲಾಗುತ್ತಿದ್ದು, ಎಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ಆಯಾ ಜಿಲ್ಲಾ ಡಯಟ್ ಕೇಂದ್ರಗಳಲ್ಲಿ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ.

Snehal

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ

**ಕ್ರಮಕ್ಕಾಗಿ,**

1. ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ, ಎಲ್ಲಾ ಜಿಲ್ಲೆಗಳು

**ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ನಿರ್ದೇಶಕರು, ಡಿ.ಎಸ್.ಇ.ಆರ್.ಟಿ, ಬೆಂಗಳೂರು ರವರಿಗೆ ಮಾಹಿತಿಗಾಗಿ
5. ರಾಜ್ಯದ ಎಲ್ಲಾ ಡಯಟ್ ಪ್ರಾಂಶುಪಾಲರು.
6. ಕಛೇರಿ ಪ್ರತಿ.